ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಬಾಲ ಕಾರ್ಮಿಕರ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

786 (938) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಬಾಲ ಕಾರ್ಮಿಕರ ನಿಷೇಧ ಕಾಯಿದೆ ಜಾರಿಯಾಗಿ ಹಲವಾರು ವರ್ಷಗಳಾಗಿದ್ದರೂ ಇಂದಿಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಬಾಲ ಕಾರ್ಮಿಕರು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳಗಾವಿ ಜಿಲ್ಲೆಯಲ್ಲಿ ಹೋಟೆಲ್, ಅಂಗಡಿ, ಗ್ಯಾರೇಜ್ ಮುಂತಾದ ಹಲವಾರು ಕಡೆಗಳಲ್ಲಿ ಇಂದಿಗೂ ಕಾರ್ಯನಿರ್ವಹಿಸುತ್ತಿರುವ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಸದರಿ ಕಾನೂನಿನಡಿಯಲ್ಲಿ ಎಷ್ಟು ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ ;

(ಈ) ದಾಖಲಿಸಲಾದ ಇಂತಹ ಪ್ರಕರಣಗಳಲ್ಲಿ ಶಿಕ್ಷೆಗೆ ಒಳಪಡಿಸಿರುವ ಪ್ರಕರಣಗಳೆಷ್ಟು ;

(ಉ) ಕಾನೂನಿನಡಿಯಲ್ಲಿ ರಕ್ಷಣೆ ಮಾಡಲಾದ ಬಾಲ ಕಾರ್ಮಿಕ ಮಕ್ಕಳ ಪುನರ್ವಸತಿಗಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು?